# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : **900**

ಸದಸ್ಯರ ಹೆಸರು : ಶ್ರೀ ರಘುನಾಥ್ ರಾವ್ ಮಲ್ಕಾಪೂರೆ (ವಿಧಾನ ಸಭೆಯಿಂದ ಚುನಾಯಿತರಾದವರು)

ಉತ್ತರಿಸಬೇಕಾದ ದಿನಾಂಕ : 12-03-2020

ಉತ್ತರಿಸುವ ಸಚಿವರು : ಮುಖ್ಯಮಂತ್ರಿಗಳು

***

| | ಪ್ರಶ್ನೆ | ಉತ್ತರ |
|---|---|---|
| ಅ) | ಬೀದರ್ ಜಿಲ್ಲೆಯಲ್ಲಿ ವಿದ್ಯುತ್ ಸಂಪರ್ಕ ಇಲ್ಲದಿರುವ ಕುಟುಂಬಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ವಿವರ ನೀಡುವುದು) | ಬೀದರ್ ಜಿಲ್ಲೆಯಲ್ಲಿ ವಿದ್ಯುತ್ ಸಂಪರ್ಕ ಇಲ್ಲದಿರುವ ಕುಟುಂಬಗಳಿಗೆ ವಿದ್ಯುತ್ ಸಂಪರ್ಕ ಕಲ್ಪಿಸಲು ಪ್ರಗತಿಯಲ್ಲಿರುವ ಅರ್ಜಿಗಳ ತಾಲ್ಲೂಕುವಾರು ವಿವರ ಹೀಗಿದೆ; ಬೀದರ್-0, ಔರಾದ-529, ಭಾಲ್ಕಿ-0, ಬಸವಕಲ್ಯಾಣ-0, ಹುಮ್ನಾಬಾದ-0. |
| ಆ) | ದೀನದಯಾಳ್ ಉಪಾಧ್ಯಾಯ ಗ್ರಾಮೀಣ ವಿದ್ಯುದೀಕರಣ ಯೋಜನೆಯಡಿಯಲ್ಲಿ ಇದುವರೆಗೂ ಎಷ್ಟು ಮನೆಗಳಿಗೆ ವಿದ್ಯುತ್ ಸಂಪರ್ಕ ಕಲ್ಪಿಸಲಾಗಿದೆ; ವಿದ್ಯುತ್ ಸಂಪರ್ಕ ಕಲ್ಪಿಸಲು ಬಾಕಿ ಇರುವ ಮನೆಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ಮಾಹಿತಿ ನೀಡುವುದು) | ದೀನದಯಾಳ್ ಉಪಾಧ್ಯಾಯ ಗ್ರಾಮೀಣ ವಿದ್ಯುದೀಕರಣ ಯೋಜನೆಯಡಿಯಲ್ಲಿ ಇದುವರೆಗೂ ವಿದ್ಯುತ್ ಸಂಪರ್ಕ ಕಲ್ಪಿಸಿದ ತಾಲ್ಲೂಕುವಾರು ಮನೆಗಳ ವಿವರ; ಬೀದರ್-241, ಔರಾದ-698, ಭಾಲ್ಕಿ-43, ಬಸವಕಲ್ಯಾಣ-269, ಹುಮ್ನಾಬಾದ-118.<br>ಸದರಿ ಯೋಜನೆ ಮುಗಿದ ಬಳಿಕ ವಿದ್ಯುತ್ ಹೊಂದಿಲ್ಲದ 16,489 ಸಂಖ್ಯೆ ಮನೆಗಳನ್ನು ಗುರುತಿಸಿ ಇದರಲ್ಲಿ 15,960 ಮನೆಗಳಿಗೆ ಸೌಭಾಗ್ಯ ಯೋಜನೆಯಡಿಯಲ್ಲಿ ವಿದ್ಯುತ್ ಸಂಪರ್ಕ ಒದಗಿಸಲಾಗಿದೆ.<br>ಬಾಕಿ 529 ಮನೆಗಳಿಗೆ ವಿದ್ಯುತ್ ಸಂಪರ್ಕ ಕಲ್ಪಿಸುವ ಕಾಮಗಾರಿ ಪ್ರಗತಿಯಲ್ಲಿದೆ. |
| ಇ) | ಈ ಯೋಜನೆಯಲ್ಲಿ ಕೈಬಿಟ್ಟು ಹೋಗಿರುವ ವಿದ್ಯುತ್ ಸಂಪರ್ಕ ಇಲ್ಲದ ಮನೆಗಳಿಗೆ ವಿದ್ಯುತ್ ಸಂಪರ್ಕ ಕಲ್ಪಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ? (ವಿವರ ನೀಡುವುದು) | DDUGJY ಯೋಜನೆಯಡಿಯಲ್ಲಿ ಕೈಬಿಟ್ಟು ಹೋಗಿರುವ ವಿದ್ಯುತ್ ಸಂಪರ್ಕ ಇಲ್ಲದ ಮನೆಗಳಿಗೆ SAUBHAGYA ಯೋಜನೆಯಡಿಯಲ್ಲಿ ವಿದ್ಯುತ್ ಸಂಪರ್ಕ ಕಲ್ಪಿಸಲು ಗುಲ್ಬರ್ಗಾ ವಿದ್ಯುತ್ ಸರಬರಾಜು ಕಂಪನಿ ಕ್ರಮ ಕೈಗೊಂಡಿದೆ.<br>ವಿದ್ಯುತ್ ಸಂಪರ್ಕ ಕಲ್ಪಿಸಲು ಉದ್ದೇಶಿಸಿದ ಮನೆಗಳ ತಾಲ್ಲೂಕುವಾರು ವಿವರ; (see table below) |

| ತಾಲ್ಲೂಕುವಾರು | ಗುರುತಿಸಿದ | ಸಾಧನೆ | ಪ್ರಗತಿಯಲ್ಲಿರುವ |
|---|---|---|---|
| ಬೀದರ್ | 3202 | 3202 | 0 |
| ಭಾಲ್ಕಿ | 2797 | 2797 | 0 |
| ಔರಾದ | 3634 | 3105 | 529 |
| ಹುಮ್ನಾಬಾದ | 2872 | 2872 | 0 |
| ಬಸವಕಲ್ಯಾಣ | 3984 | 3984 | 0 |
| ಒಟ್ಟು | 16489 | 15960 | 529 |

ಇವುಗಳಲ್ಲಿ 15960 ಮನೆಗಳಿಗೆ ವಿದ್ಯುತ್ ಸಂಪರ್ಕ ಕಲ್ಪಿಸಲಾಗಿದೆ. ಉಳಿದವುಗಳ ಕಾಮಗಾರಿ ಪ್ರಗತಿಯಲ್ಲಿದೆ. ಮಾರ್ಚ್-2020 ರ ಅಂತ್ಯದವರೆಗೆ ಕಾಮಗಾರಿ ಪೂರ್ಣಗೊಳಿಸಿ, ವಿದ್ಯುತ್ ಸಂಪರ್ಕ ಒದಗಿಸಲಾಗುತ್ತದೆ.

ಸಂಖ್ಯೆ: ಎನರ್ಜಿ 50 ಇಬಿಎಸ್ 2020

ಬಿ.ಎಸ್. ಯಡಿಯೂರಪ್ಪ

(ಬಿ.ಎಸ್.ಯಡಿಯೂರಪ್ಪ)

ಮುಖ್ಯಮಂತ್ರಿ